# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ :– 20/03/2021 ರಂದು ವಾರ್ಡ್–48ರ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿ**

**ಸಭೆಗೆ ಹಾಜರಿದ್ದ ಅಧಿಕಾರಿಗಳು :–**

1. ಶ್ರೀ. ಪ್ರೇಮಾನಂದ ಕುಮಾರ್, ನೋಡಲ್ ಅಧಿಕಾರಿ.
2. ಶ್ರೀ. ಬಸವರಾಜು , ವಾರ್ಡ್ ಇಂಜಿನೀಯರ್.
3. ಶ್ರೀ. ವೆಂಕಟೇಶ್, ಹಿರಿಯ ಆರೋಗ್ಯ ಪರೀವಿಕ್ಷಕರು.
4. ಶ್ರೀ. ಕೋದಂಡ ರಾಮ, ಎಲೆಕ್ಟಿಕ್ರಲ್ ಇಂಜಿನೀಯರ್ ಬೆಸ್ಕಾಮಂ.
5. ಶ್ರೀ. ಮುರಳಿ ಕಂದಾಯ ಪರೀವಿಕ್ಷಕರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯ ಕಾರ್ಯದರ್ಶಿರವರು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್ ಸಮಿತಿ ಸಭೆಯನ್ನು ಕಂದಾಯ ಕಛೇರಿಯಲ್ಲಿ ನಡೆಸಲಾಯಿತು. ನೋಡಲ್ ಅಧಿಕಾರಿ ರವರು ವಾರ್ಡ್‌ನ ಸಾರ್ವಜನಿಕರ ಕುಂದು ಕೋರತೆಗಳು ಸಮಿತಿ ಸಭೆಯ ಸದಸ್ಯರವರೊಂದಿಗೆ ಹಾಗೂ ಅಧಿಕಾರಿಗಳ ಜೊತೆಯಲ್ಲಿ ಚರ್ಚಿಸಿದರು ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ಈ ಕೆಳಕಂಡಂತೆ ತಿಳಿಸಲಾಗಿರುತ್ತದೆ.

- **ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯ ಶಾದಾಬ್ ನಗರ ರಸ್ತೆ ಬದಿಯ ಮೋರಿಯನ್ನು ಡಿಸಿಲ್ಟ್ ಮಾಡಲು ವಾರ್ಡ್ ಇಂಜಿನಿಯರ್‌ರವರಿಗೆ ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯ ಸಂದ್ಯಾವು ನಗರ 1ನೇ ಮುಖ್ಯ ರಸ್ತೆಯಲ್ಲಿನ ಕಲ್ವರ್ಟ್ ಡಿಸಿಲ್ಟ್ ಮಾಡಲು ವಾರ್ಡ್ ಇಂಜಿನಿಯರ್‌ರವರಿಗೆ ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯಲ್ಲಿನ ಶಾಂಪುರ ಮುಖ್ಯ ರಸ್ತೆ ಗುಂಡಿಗಳನ್ನು ಮುಚ್ಚಲು ಕೂಡಲೆ ಕ್ರಮ ವಹಿಸಲು ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳಿಗೆ ಪರಿಹರಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು

- **ಘನತ್ಯಾಜ್ಯ ಇಲಾಖೆಗೆ ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿನ ಮುನಿಬೈರಪ್ಪ ಬ್ಲಾಕ್‌ನಲ್ಲಿ ಕಸ ನಿರ್ವಹಣೆ ಸರಿಯಾಗಿ ಮಾಡುತ್ತಿಲ್ಲ, ಕೂಡಲೆ ಈ ಸಮಸ್ಯೆ ಪರಿಹರಿಸಲು ಕಿರಿಯ ಆರೋಗ್ಯ ಪರೀವಿಕ್ಷಕರಿಗೆ ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿ ಹೊಸದಾಗಿ ಬ್ಲಾಕ್ ಸ್ಪಾಟ್ ಹುಟ್ಟುಕೊಳ್ಳುವುದನ್ನು ತಡೆಯಲು ಸದಸ್ಯರುಗಳು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಹಾಗೂ ಅಧಿಕಾರಿಗಳೊಂದಿಗೆ ಸಹಕರಿಸಲು ಸೂಚಿಸಿದರು.

ಕ್ರಮ ಕಿರಿಯ ಆರೋಗ್ಯ ಪರೀವಿಕ್ಷಕರು ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಕೂಡಲೆ ಕ್ರಮ ವಹಿಸಲು ಸೂಚಿಸಿದರು.

- **ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿನ ನೀರಿನ ಸಮಸ್ಯೆಗಳನ್ನು ಕೂಡಲೆ ಪರಿಹರಿಸಬೇಕಾಗಿ ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ಮನೆಗೆ ವಾಟರ್ ಮೀಟರ್ ಹೆಚ್ಚಿನ ಸಂಖ್ಯೆಯಲ್ಲಿ ಹಾಕಿಸಿಕೋಳ್ಳಲು ಸಾರ್ವಜನಿಕರಿಗೆ ಅರಿವು ಮೂಡಿಸಲು ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳನ್ನು ಪರಿಹರಿಸುವಂತೆ ಸಹಾಯಕ ಅಭಿಯಂತರರಿಗೆ ಈ ಸಭೆ ಮುಖಾಂತರ ಸೂಚಿಸಲಾಯಿತು.

- **ಅರಣ್ಯ ಇಲಾಖೆಗೆ ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯ ಮರಗಳಲ್ಲಿ ನಿರ್ಜೀವವಾದ ರೆಂಬೆ ಕೊಂಬೆಗಳಿದ್ದು ಇವುಗಳನ್ನು ಕೂಡಲೆ ತೇರುವುಗೋಳಿಸಲು ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗೆ ಪರಿಹರಿಸುವಂತೆ ಅರಣ್ಯಾಧಿಕಾರಿಗಳಿಗೆ ಈ ಸಭೆ ಮುಂಖಾಂತರ ಸೂಚಿಸಲಾಯಿತು.

- **ಸ್ಟ್ರೀಟ್ ಲೈಟ್ ಇಲಾಖೆಗೆ ಸಂಬಂದಿಸಿರುವುದು**

2. ವಾರ್ಡ್ ವ್ಯಾಪ್ತಿಯಲ್ಲಿನ ಡಿ.ಜೆ.ಹಳ್ಳಿ ಮುಖ್ಯರಸ್ತೆಯ ಸ್ಟ್ರೀಟ್‌ಲೈಟ್‌ಗಳು ಕೆಟ್ಟು ಹೊಗಿದ್ದು ರಿಪೇರಿ ಮಾಡಲು ಸೂಚಿಸಿದರು.

ಕ್ರಮ : ಸಹಾಯಕ ಅಭಿಯಂತರರು (ಎಲೆಕ್ಟ್ರಿಕಲ್ ಮೆಯೋಹಾಲ್) ರವರಿಗೆ ಸೂಕ್ತ ಕ್ರಮವಹಿಸಲು ಈ ಸಭೆ ಮುಖಾಂತರ ಸೂಚಿಸಲಾಯಿತು.

➢ <u>ಬೆಸ್ಕಾಂ ಇಲಾಖೆಗೆ ಸಂಬಂದಿಸಿರುವುದು</u>

1. ವಾರ್ಡ್ ವ್ಯಾಪ್ತಿಯಲ್ಲಿ ಕರೆಂಟ್ ಕಂಬದಲ್ಲಿ ವೈರುಗಳು ಸಾಗಿಹೋಗಿ ನೇತ್ತಾಡುತ್ತಿದ್ದು ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಕ್ರಮ ವಹಿಸಲು ಸೂಚಿಸಿದರು.

ಕ್ರಮ : **ಕಿರಿಯ ಅಭಿಯಂತರರು (ಬೆಸ್ಕಾಂ) ರವರಿಗೆ ಈ ಮೇಲೆ ಸೂಚಿಸಿರುವ ಎಲ್ಲಾ ಸಮಸ್ಯಗಳಿಗೆ ಸೂಕ್ತ ಕ್ರಮ ವಹಿಸುವಂತೆ ಈ ಸಭೆ ಮುಖಾಂತರ ಸೂಚಿಸಲಾಯಿತು.**

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

**ಸದಸ್ಯ ಕಾರ್ಯದರ್ಶಿ –48** | **ನೋಡಲ್ ಅಧಿಕಾರಿ ವಾರ್ಡ್ –48**

**ಪ್ರತಿಗಳನ್ನು:**

- **ಮಾನ್ಯ ಆಡಳಿತಾಧಿಕಾರಿ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಮಾನ್ಯ ವಲಯ ಆಯುಕ್ತರು ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ**
- **ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ–ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ಕಾರ್ಯಪಾಲಕ ಅಭಿಯಂತರರು (ಸ್ಟ್ರಿಟ್ ಲೈಟ್) ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಸಹಾಯಕ ನಿರ್ದೇಶಕರು (ಪೂರ್ವ) ಪಶು ಪಾಲನೆ ಇಲಾಖೆ ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ವಲಯ ಅರಣ್ಯಾಧಿಕಾರಿಗಳು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.**
- **ಕಛೇರಿ ಪ್ರತಿ.**